ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 05 ನೇ ಫೆಬ್ರುವರಿ, 2021

ಮೂಢನಂಬಿಕೆಯಿಂದ ಕೂಡಿದ ಬಾಲ್ಯ ವಿವಾಹಗಳು

ಶ್ರೀ ಕೆ. ಎ. ತಿಪ್ಪೇಸ್ವಾಮಿ(ನಾಮನಿರ್ದೇಶನ ಹೊಂದಿದವರು) -

82 (574) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮತ್ತು ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಕಳೆದ 3 ವರ್ಷಗಳಲ್ಲಿ ರಾಜ್ಯದಲ್ಲಿ ಸಂಭವಿಸಿರುವ ಬಾಲ್ಯ ವಿವಾಹಗಳೆಷ್ಟು; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ನಿಗದಿಪಡಿಸಿರುವ ಸಮರ್ಥನೀಯ ಗುರಿಗಳನ್ನು (Sustainable Goals) ತಲುಪಲು ರಾಜ್ಯ ಸರ್ಕಾರ ಬಾಲ್ಯ ವಿವಾಹ ಮತ್ತು ಬಲವಂತದ ವಿವಾಹಗಳನ್ನು ತಡೆಗಟ್ಟಲು ಕೈಗೊಂಡಿರುವ ಕ್ರಮಗಳೇನು; (ಸಂಪೂರ್ಣ ವಿವರ ನೀಡುವುದು)

(ಇ) ಇತ್ತೀಚಿನ ಕೋರೋನ ಸೋಂಕು ಪಿಡುಗಿನಿಂದ ಬಾಲ್ಯ ವಿವಾಹಗಳಲ್ಲಿ ಗಣನೀಯ ಏರಿಕೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಾಲ್ಯ ವಿವಾಹಗಳನ್ನು ತಡೆಗಟ್ಟಲು ಸರ್ಕಾರವು ತೆಗೆದುಕೊಂಡಿರುವ ಕ್ರಮಗಳೇನು;

(ಈ) ಬಹುತೇಕ ಬಾಲ್ಯ ವಿವಾಹ ಪ್ರಕರಣಗಳಲ್ಲಿ ತಾಯಿ-ತಂದೆಯರ ಆರ್ಥಿಕ ದುರ್ಬಲತೆ ಮತ್ತು ಬಾಲಕಿಯರು ತಂದೆ-ತಾಯಿಗಳಿಗೆ ಭಾರವಾಗಬಾರದೆಂಬ ಭಾವನೆಗಳಿಂದ ಕೂಡಿದೆ ಎನ್ನುವ ಅಂಶಗಳು ಸರ್ಕಾರದ ಅರಿವಿಗೆ ಬಂದಿದೆಯೇ;

(ಊ) ರಾಜ್ಯದಲ್ಲಿ ಬಾಲ್ಯ ವಿವಾಹಗಳು ಯಾವ ವರ್ಗ/ಸಮುದಾಯಗಳಲ್ಲಿ ಸಾಂಪ್ರದಾಯಿಕವಾಗಿ ಉಳಿದಿದೆ ಎಂಬುವುದು ಗಣತಿ/ಸಮೀಕ್ಷೆಯಿಂದ ಸರ್ಕಾರದ ಗಮನಕ್ಕೆ ಬಂದಿದೆಯೇ? (ವಿವರ ನೀಡುವುದು)